ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಜೋಯಿಡಾದಲ್ಲಿ ಭತ್ತ ಖರೀದಿ ಕೇಂದ್ರ ಸ್ಥಾಪನೆ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

172(230) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ರೈತರ ಆದಾಯದ ಮೂಲವಾದ ಭತ್ತದ ಖರೀದಿ ಕೇಂದ್ರವು ಇಲ್ಲದೆ ಇರುವುದರಿಂದ ದೂರದ ಹಳಿಯಾಳ ಪಟ್ಟಣದಲ್ಲಿ ಭತ್ತ ಖರೀದಿ ಕೇಂದ್ರಕ್ಕೆ

ಹೋಗಲು ಆಗದೆ ಬೆಳೆದ ಭತ್ತಕ್ಕೆ ಬೆಂಬಲ ಬೆಲೆ ಸಿಗದೆ ದಲ್ಲಾಳಿಗಳಿಂದ ರೈತರು ಮೋಸ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈ ರೀತಿ ಭತ್ತದ ಖರೀದಿ ಕೇಂದ್ರ ಜೋಯಿಡಾದಲ್ಲಿ ಇಲ್ಲದೆ ಇರುವುದರಿಂದ ಸಂಕಷ್ಟದಲ್ಲಿರುವ ರೈತರ ಹಿತ ದೃಷ್ಟಿಯಿಂದ ಸರ್ಕಾರ ಕೂಡಲೇ ಜೋಯಿಡಾದಲ್ಲಿ ಮತ್ತು ರಾಮನಗರದಲ್ಲಿ ಭತ್ತದ ಖರೀದಿ ಕೇಂದ್ರ ಪ್ರಾರಂಭಿಸಲು ಕ್ರಮ ಕೈಗೊಳ್ಳುವುದೆ ; ಹಾಗಾದರೆ, ಸರ್ಕಾರಕ್ಕೆ ಸದರಿ ಭತ್ತದ ಖರೀದಿ ಕೇಂದ್ರ ಪ್ರಾರಂಭಿಸಲು ಬೇಕಾಗುವ ಕಾಲಾವಕಾಶ ಎಷ್ಟು ? (ವಿವರ ನೀಡುವುದು)